ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 05/03/2020

# ವರ್ಗ ದಂಧೆ ಭ್ರಷ್ಟಾಚಾರದ ಮೂಲ: ಸಿಎಂ

## ಎಲ್ಲರೂ ಸಹಕರಿಸಿದರೆ ಭ್ರಷ್ಟಾಚಾರ ನಿಯಂತ್ರಣ ಸಾಧ್ಯ | 'ಸಂವಿಧಾನ' ಚರ್ಚೆಯಲ್ಲಿ ಬಿಎಸ್‌ವೈ ಅಭಿಮತ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ವರ್ಗಾವಣೆ ದಂಧೆಯೇ ಭ್ರಷ್ಟಾಚಾರಕ್ಕೆ ಮೂಲ ಕಾರಣವಾಗಿದ್ದು, ಪ್ರತಿಯೊಬ್ಬರೂ ಸಹಕಾರ ನೀಡಿದರೆ ಮಾತ್ರ ಭ್ರಷ್ಟಾಚಾರ ನಿಯಂತ್ರಣ ಸಾಧ್ಯ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಭಿಪ್ರಾಯಪಟ್ಟಿದ್ದಾರೆ.

ಬುಧವಾರ ನಡೆದ ಸಂವಿಧಾನ ಕುರಿತ ವಿಶೇಷ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಲಂಚ ನೀಡದೆ ಕೆಲಸವಾಗುವುದಿಲ್ಲ, ಅಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದನ್ನು ಕೊನೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಭ್ರಷ್ಟಾಚಾರ ನಿಯಂತ್ರಣ ಮಾಡಲು ಪ್ರತಿಯೊಬ್ಬರ ಸಹಕಾರ ಬೇಕು. ಹಾಗಿದ್ದಲ್ಲಿ ಮಾತ್ರ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸಾಧ್ಯ ಎಂದು ಹೇಳಿದರು.

ವಿಶ್ವದ ಇತರೆ ದೇಶದಲ್ಲಿನ ಸಂವಿಧಾನಗಳಿಗಿಂತ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನವು ಉತ್ಕೃಷ್ಟವಾದುದು. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗದವರ ಜನರ ಜೀವನವು ಸ್ವಾತಂತ್ರ್ಯಾನಂತರವೂ ಬದಲಾಗಿಲ್ಲ. ಹಲವೆಡೆ ಈಗಲೂ ಸ್ವಾತಂತ್ರ್ಯ ಪೂರ್ವ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಇದಕ್ಕೆಲ್ಲಾ ಕಾರಣ ಯಾರು ಎಂಬುದರ ಚರ್ಚೆ ನಡೆದರೆ ಜನಪ್ರತಿನಿಧಿಗಳೇ . ಅದರ ಹೊಣೆಯನ್ನು ಹೊರಬೇಕು. ಜನಪ್ರತಿನಿಧಿಗಳು ಸಿಗುವ ಅನುದಾನದಲ್ಲಿ ಸ್ವಲ್ಪಭಾಗವನ್ನು ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ನೀಡುವ ನಿಟ್ಟಿನಲ್ಲಿ ಯೋಚನೆ ಮಾಡಬೇಕು. ಆಗ ಅಭಿವೃದ್ಧಿಯ ಪರ್ವಕಾಲ ಆರಂಭವಾಗಲಿದೆ. ಮಹಿಳೆಯರು ಸಹ ನಿರ್ಭೀತಿಯಿಂದ ಓಡಾಡುವ ಪರಿಸ್ಥಿತಿಯನ್ನು ನಿರ್ಮಾಣವಾಗಬೇಕಿದೆ ಎಂದು ತಿಳಿಸಿದರು.

## ಸಿಎಎ, ಎನ್‌ಆರ್‌ಸಿಗೆ ವಿರೋಧ ಅನಗತ್ಯ



ಸಂಸತ್ ನಡೆಯುವ ಕಾರ್ಯವೈಖರಿ ಮತ್ತು ಅದಕ್ಕೆ ಯಾವ ರೀತಿಯಲ್ಲಿ ಬೆಲೆ ಕೊಡಬೇಕು ಎಂಬುದರ ಬಗ್ಗೆ ತಿಳುವಳಿಕೆ ಇರುವವರೇ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ), ರಾಷ್ಟ್ರೀಯ ನಾಗರಿಕ ನೋಂದಣಿ (ಎನ್‌ಆರ್‌ಸಿ) ಬಗ್ಗೆ ವಿರೋಧ ವ್ಯಕ್ತಪಡಿಸುತ್ತಿರುವುದು ಅನಗತ್ಯ ಎಂದು ಮುಖ್ಯಮಂತ್ರಿಗಳು ಪರೋಕ್ಷವಾಗಿ ಕಾಂಗ್ರೆಸ್‌ಗೆ ಚಾಟಿ ಬೀಸಿದರು.

ಸಿಎಎ, ಎನ್‌ಆರ್‌ಸಿಗೆ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಸಂಸತ್‌ನ ಕಾರ್ಯವೈಖರಿ ಮತ್ತು ಸಂಸತ್‌ಗೆ ಯಾವ ರೀತಿಯಲ್ಲಿ ಬೆಲೆ ಕೊಡಬೇಕು ಎಂಬುದು ಗೊತ್ತಿರುವವರೇ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಸಂವಿಧಾನಕ್ಕೆ ಅನುಗುಣವಾಗಿ ಜಾರಿ ಮಾಡಲಾಗುತ್ತಿದೆ. ವಿರೋಧ ವ್ಯಕ್ತಪಡಿಸುತ್ತಿರುವುದು ಅನಗತ್ಯ ಎಂದು ಹೇಳಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ದೇಶಕ್ಕಾಗಿ ನಾನು ಎಂಬ ಭಾವನೆ ಇತ್ತು. ಆದರೆ ದುರದೃಷ್ಟವಶಾತ್ ಪ್ರಸ್ತುತ ಪರಿಸ್ಥಿತಿಯು ನಮಗಾಗಿ ದೇಶ ಇದೆ ಎಂಬುದನ್ನು ಭಾವಿಸಲಾಗಿದೆ. ಪರಿಣಾಮ ಜ್ವಲಂತ ಸಮಸ್ಯೆಗಳನ್ನು ಎದುರಿಸಬೇಕಾಗಿದೆ. ಸಂವಿಧಾನದಲ್ಲಿ ತುಳಿತಕ್ಕೊಳಗಾದವರ ಏಳ್ಗೆಗಾಗಿ ಹಕ್ಕು ನೀಡಲಾಗಿದೆ. ಕೇವಲ ಒಂದು ಸಮುದಾಯಕ್ಕೆ ಮಾತ್ರ ಸಂವಿಧಾನ ರಚನೆಯಾಗಿಲ್ಲ. ಪ್ರತಿ ವರ್ಗ, ಮಹಿಳೆಯರ ಬಗ್ಗೆ ವಿಶೇಷ ಕಾಳಜಿ ವಹಿಸಲಾಗಿದೆ. ಅಂಬೇಡ್ಕರ್ ಅವರ ಶ್ರಮ ಇಲ್ಲದಿದ್ದರೆ ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನ ಸಿಗುತ್ತಿರಲಿಲ್ಲ. ದೈನದಂದಿನ ಸಮಸ್ಯೆಗಳಿಗೂ ಸಂವಿಧಾನದಲ್ಲಿ ಉತ್ತರ ಇದೆ ಎಂದರು.

ಸಂವಿಧಾನವನ್ನೇ ಬಡುಮೇಲು ಮಾಡಿ ಸರ್ಕಾರ ರಚನೆ ಮಾಡಿರುವ ಉದಾಹರಣೆಗಳು ಹಲವು ದೇಶದಲ್ಲಿ ನಡೆದಿದೆ. ಆಧರೆ, ದೇಶದಲ್ಲಿ ಅಂತಹ ವಾತಾವರಣ ಇಲ್ಲ. ಅಂತಹ ಉತ್ಕೃಷ್ಟ ಸಂವಿಧಾನ ರಾಷ್ಟ್ರಕ್ಕೆ ನೀಡಲಾಗಿದೆ. ದೇಶವು ಆಂತರಿಕ ಸಂಕಷ್ಟಕ್ಕೊಳಗಾದರೆ ಸಂವಿಧಾನದಲ್ಲಿ ಅದಕ್ಕೆ ಪರಿಹಾರ ಇದೆ ಎಂದು ವಿವರಿಸಿದರು.